158ನೇ ಟಿಮು (184)
ಎಫ್
01/04

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ಯತೀಂದ್ರ ಎಸ್. ಇವರು ನಿಯಮ 72ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಗ್ರಾಮೀಣಾ ಪ್ರದೇಶಗಳಲ್ಲಿ ಗ್ರಂಥಾಲಯಗಳನ್ನು ಸ್ಥಾಪಿಸುವುದು ಪ್ರಸ್ತುತ ಅತ್ಯವಶ್ಯವಾಗಿದ್ದು, ದಿನಾಂಕ 31.01.2025 ರಂದು ಸರ್ಕಾರದ ಆದೇಶ ಸಂಖ್ಯೆ: RDPR/9/GPA/2025 ರಲ್ಲಿ ಮೈಸೂರಿನಲ್ಲಿ 244 ಹೊಸ ಗ್ರಾಮ ಗ್ರಂಥಾಲಯಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಈವರೆಗೆ ಯಾವುದೇ ಗ್ರಾಮ ಗ್ರಂಥಾಲಯಗಳನ್ನು ಸ್ಥಾಪಿಸದಿರುವುದು ಕಂಡುಬಂದಿದ್ದು, ಈ ಕುರಿತು ಆದಷ್ಟು ಬೇಗ ಸದರಿ ಆದೇಶದಲ್ಲಿನಂತೆ ಗ್ರಾಮೀಣಾ ಪ್ರದೇಶಗಳಲ್ಲಿ ಗ್ರಾಮ ಗ್ರಂಥಾಲಯಗಳನ್ನು ಪ್ರಾರಂಭಿಸುವ ಬಗ್ಗೆ.

**ಉತ್ತರ:** ಕೇಂದ್ರ ಸರ್ಕಾರದ "Scheme for Special Assistance to States for Capital Investment" ಯೋಜನೆಯ "Children and Adolescents Libraries and Digital Infrastucture" ಕಾರ್ಯಕ್ರಮದಡಿಯಲ್ಲಿ ಕರ್ನಾಟಕ ರಾಜ್ಯದಲ್ಲಿ 6599 ಹೊಸ ಗ್ರಂಥಾಲಯಗಳನ್ನು ಪ್ರಾರಂಭಿಸಲು ಪ್ರತಿ ಗ್ರಂಥಾಲಯಕ್ಕೆ ರೂ.4.00 ಲಕ್ಷಗಳಂತೆ ಒಟ್ಟು ರೂ.263.96 ಕೋಟಿಗಳನ್ನು ಮಂಜೂರು ಮಾಡಿರುತ್ತದೆ.

ಪ್ರತಿ ಗ್ರಂಥಾಲಯಕ್ಕೆ ನಿಗದಿಯಾಗಿರುವ ರೂ 4.00 ಲಕ್ಷಗಳ ಮೊತ್ತವನ್ನು ಕಾರ್ಯಕ್ರಮದ ಮಾರ್ಗಸೂಚಿಗಳಂತೆ ಪ್ರತಿ ಗ್ರಂಥಾಲಯಕ್ಕೆ ತಲಾ ರೂ. 2.00 ಲಕ್ಷದಲ್ಲಿ ಪುಸ್ತಕಗಳು, ರೂ 1.00 ಲಕ್ಷದಲ್ಲಿ ಪೀಠೋಪಕರಣಗಳು ಮತ್ತು ರೂ 1.00 ಲಕ್ಷದಲ್ಲಿ ಡಿಜಿಟಲ್ ಉಪಕರಣಗಳನ್ನು ಖರೀದಿಸಲು ಅವಕಾಶವಿರುತ್ತದೆ.

ಮೈಸೂರು ಜಿಲ್ಲೆಯ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: RDPR/9/GPA/2025, ದಿನಾಂಕ:31-01-2025 ರನ್ವಯ 244 ಹಾಗೂ ಸರ್ಕಾರದ : RDPR/GPA/443/2025, ದಿನಾಂಕ: 23-06-2025 ರನ್ವಯ 26 ಸೇರಿ ಒಟ್ಟು 270 ಹೊಸ ಗ್ರಾಮ ಗ್ರಂಥಾಲಯಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಗ್ರಾಮ ಗ್ರಂಥಾಲಯಗಳಿಗೆ ತಲಾ ರೂ 2.00 ಲಕ್ಷಗಳ ವೆಚ್ಚದಲ್ಲಿ National Book Trust India, Ministry of Education, Government of India ರವರಿಂದ ಪುಸ್ತಕಗಳನ್ನು ಖರೀದಿಸಿ, ಜಿಲ್ಲಾ ಪಂಚಾಯತಿಗಳ ಮೂಲಕ ಗ್ರಂಥಾಲಯಗಳಿಗೆ ವಿತರಿಸಲಾಗಿರುತ್ತದೆ.

ಪ್ರತಿ ಗ್ರಾಮ ಗ್ರಂಥಾಲಯಕ್ಕೆ ರೂ.1.00 ಲಕ್ಷ ವೆಚ್ಚದಲ್ಲಿ ಪೀಠೋಪಕರಣಗಳನ್ನು ಖರೀದಿಸಲು ಜಿಲ್ಲಾ ಪಂಚಾಯತಿಗಳಿಗೆ ಹಣ ಬಿಡುಗಡೆ ಮಾಡಲಾಗಿರುತ್ತದೆ. ಬೆಳಗಾವಿ ಜಿಲ್ಲೆ ಹೊರತುಪಡಿಸಿ ಉಳಿದ ಜಿಲ್ಲೆಗಳಲ್ಲಿ ಪೀಠೋಪಕರಣ ಖರೀದಿ ಮತ್ತು ಸರಬರಾಜು ಪೂರ್ಣಗೊಂಡಿರುತ್ತದೆ.

ಪ್ರತಿ ಗ್ರಂಥಾಲಯಕ್ಕೆ ರೂ. 1.00 ಲಕ್ಷ ವೆಚ್ಚದಲ್ಲಿ ಇಲಾಖಾ ತಾಂತ್ರಿಕ ಸಲಹಾ ಸಮಿತಿಯು ನಿರ್ಧರಿಸಿರುವ Specifications ಹೊಂದಿರುವ ಕಂಪ್ಯೂಟರ್ ಮತ್ತು ಯುಪಿಎಸ್ ಗಳನ್ನು ಕಿಯೋನಿಕ್ಸ್ ಮೂಲಕ ಖರೀದಿಸಲು ಸಚಿವ ಸಂಪುಟ ಅನುಮೋದನೆ ದೊರೆತಿರುತ್ತದೆ. ಕಿಯೋನಿಕ್ಸ್ ಸಂಸ್ಥೆಯ ಮೂಲಕ ಕಂಪ್ಯೂಟರ್‌ಗಳನ್ನು ಖರೀದಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಗ್ರಾಮ ಗ್ರಂಥಾಲಯಗಳ ಕಾರ್ಯಾಚರಣೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ರಚಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

**ಸಂಖ್ಯೆ:**RDPR 361 GPA 2026.

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.